# ಕರ್ನಾಟಕ ವಿಧಾನಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1529 |
| ಸದಸ್ಯರ ಹೆಸರು | ಡಾ. ತಳವಾರ್ ಸಾಬಣ್ಣ (ನಾಮನಿರ್ದೇಶಿತರು ) |
| ಉತ್ತರಿಸಬೇಕಾದ ದಿನಾಂಕ | 19-12-2025 |
| ಉತ್ತರಿಸುವ ಸಚಿವರು | ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು |

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಗಡಿ ಜಿಲ್ಲೆ ಬೆಳಗಾವಿಯಲ್ಲಿ ಹೆಚ್ಚಿನ ಶಿಕ್ಷಣ ಸಂಸ್ಥೆಗಳಿದ್ದು ತಾಲ್ಲೂಕು/ಜಿಲ್ಲಾ ಮಟ್ಟದಲ್ಲಿ ಬಡ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗಾಗಿ ವಸತಿ ನಿಲಯಗಳ ಬೇಡಿಕೆಗೆ ತಕ್ಕಂತೆ ಕೊರತೆ ಇರುವುದು ಸರಕಾರದ ಗಮನಕ್ಕೆ ಬಂದಿದೆಯೇ;</td><td>ಬೆಳಗಾವಿ ಜಿಲ್ಲೆಯಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ 99 ಮೆಟ್ರಿಕ್ ಪೂರ್ವ ಹಾಗೂ 70 ಮೆಟ್ರಿಕ್ ನಂತರದ ಹೀಗೆ ಒಟ್ಟು 169 ವಿದ್ಯಾರ್ಥಿನಿಲಯಗಳು ಕಾರ್ಯನಿರ್ವಹಿಸುತ್ತಿದ್ದು, ಸದರಿ ವಿದ್ಯಾರ್ಥಿನಿಲಯಗಳಲ್ಲಿ ಕ್ರಮವಾಗಿ 5195 ಹಾಗೂ 9700 ವಿದ್ಯಾರ್ಥಿಗಳಿಗೆ ಪ್ರವೇಶಾತಿಯನ್ನುಕಲ್ಪಿಸಲಾಗಿದ್ದು, 2025-26ನೇ ಶೈಕ್ಷಣಿಕ ಸಾಲಿನಲ್ಲಿ ಈ ವಿದ್ಯಾರ್ಥಿನಿಲಯಗಳಿಗೆ ಸ್ವೀಕೃತವಾದ ಅರ್ಜಿಗಳು, ಪ್ರವೇಶಾತಿ ಪಡೆದ ವಿದ್ಯಾರ್ಥಿಗಳ ವಿವರ ಈ ಕೆಳಕಂಡಂತಿದೆ.
<table>
<tr><th rowspan="2">ವಿದ್ಯಾರ್ಥಿ ನಿಲಯ ವಿಧ</th><th rowspan="2">ವಿದ್ಯಾರ್ಥಿ ನಿಲಯಗಳ ಸಂಖ್ಯೆ</th><th rowspan="2">ಮಂಜೂರಾತಿ ಸಂಖ್ಯೆ</th><th rowspan="2">ಸ್ವೀಕೃತವಾದ ಅರ್ಜಿಗಳ ಸಂಖ್ಯೆ</th><th colspan="3">ಪ್ರವೇಶ ಪಡೆದ ಅರ್ಜಿಗಳ ವಿವರ</th><th rowspan="2">ಬಾಕಿ ಉಳಿದ ಅರ್ಜಿಗಳ ವಿವರ</th></tr>
<tr><th>ನವೀಕರಣ</th><th>ಹೊಸದು</th><th>ಒಟ್ಟು</th></tr>
<tr><td>ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳು</td><td>99</td><td>5195</td><td>52484</td><td>2811</td><td>2384</td><td>5195</td><td>50100</td></tr>
<tr><td>ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳು</td><td>70</td><td>9700</td><td>144679</td><td>4835</td><td>4865</td><td>9700</td><td>139814</td></tr>
<tr><td>ಒಟ್ಟು</td><td>169</td><td>14895</td><td>197163</td><td>7646</td><td>7249</td><td>14895</td><td>189914</td></tr>
</table>
</td></tr>
<tr><td>ಆ)</td><td>ಗ್ರಾಮೀಣ ಪ್ರದೇಶಗಳಿಂದ ಪೋಸ್ಟ್ ಮೆಟ್ರಿಕ್ ಅಧ್ಯಯನಕ್ಕಾಗಿ ಜಿಲ್ಲೆಯಲ್ಲಿನ ಪಟ್ಟಣ/ನಗರಗಳಿಗೆ ಬರುವ ಹಿಂದುಳಿದ ವರ್ಗಗಳ ಸಂಖ್ಯೆ ಹೆಚ್ಚುತ್ತಿದ್ದು ಮುಂದಿನ ಶಿಕ್ಷಣಕ್ಕಾಗಿ ವಸತಿ ನಿಲಯಗಳು ಮತ್ತು ಇನ್ನಿತರ ಸೌಲಭ್ಯಗಳನ್ನು ಒದಗಿಸುವುದು ಸರ್ಕಾರದ ಜವಾಬ್ದಾರಿಯಲ್ಲವೇ;</td><td rowspan="2">ಬೆಳಗಾವಿ ನಗರದಲ್ಲಿ 22 ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳು ಕಾರ್ಯನಿರ್ವಹಿಸುತ್ತಿದ್ದು, ಸದರಿ ವಿದ್ಯಾರ್ಥಿನಿಲಯಗಳಲ್ಲಿ 2341 ನವೀಕರಣ ವಿದ್ಯಾರ್ಥಿಗಳಿದ್ದು, 507 ಖಾಲಿ ಸ್ಥಾನಗಳಿಗನುಗುಣವಾಗಿ 4125 ಅರ್ಜಿಗಳು ಸ್ವೀಕೃತವಾಗಿದ್ದು, ಈ ಪೈಕಿ 507 ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶವನ್ನು ಕಲ್ಪಿಸಲಾಗಿದ್ದು, 3618 ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶವನ್ನು ಕಲ್ಪಿಸಲು ಸಾಧ್ಯವಾಗಿರುವುದಿಲ್ಲ.<br>ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖಾ ವಿದ್ಯಾರ್ಥಿನಿಲಯಗಳಲ್ಲಿ ನಿಗಧಿಪಡಿಸಿರುವ ಮಂಜೂರಾತಿ ಸಂಖ್ಯೆಗನುಗುಣವಾಗಿ ಮೆರಿಟ್ ಮತ್ತು ಪ್ರವರ್ಗವಾರು ಮೇರೆಗೆ ಅರ್ಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಪ್ರವೇಶಾತಿಯನ್ನು ಕಲ್ಪಿಸಲಾಗುತ್ತಿರುತ್ತದೆ. ಅದರಂತೆ ಮೆಟ್ರಿಕ್-ನಂತರದ ವಿದ್ಯಾರ್ಥಿ ನಿಲಯಗಳಲ್ಲಿ ಪ್ರವೇಶಾತಿ ದೊರಕದ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ವಿದ್ಯಾಸಿರಿ ಊಟ ಮತ್ತು ವಸತಿ ಸಹಾಯ ಯೋಜನೆಯಡಿ ಅನುದಾನದ ಲಭ್ಯತೆಯನುಸಾರ ಮಾಸಿಕ ರೂ.1500/-ರಂತೆ 10 ತಿಂಗಳ ಅವಧಿಗೆ ರೂ.15000/-ಗಳನ್ನು ಮಂಜೂರು ಮಾಡಲಾಗುತ್ತದೆ.</td></tr>
<tr><td>ಇ)</td><td>ತೀರಾ ಬಡವರು ಮತ್ತು ಗ್ರಾಮೀಣ ಪ್ರದೇಶದವರಾದ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳ ಖಾಸಗಿ ಬಾಡಿಗೆ ರೂಮು. ಪಿ.ಜಿ. ಊಟದ ವೆಚ್ಚ ಭರಿಸಲಾಗದೆ ಮಧ್ಯದಲ್ಲಿ ಶಿಕ್ಷಣ ನಿಲ್ಲಿಸುತ್ತಿರುವುದು ಅವರ ಶಿಕ್ಷಣದ ಹಕ್ಕು ಕಸಿದುಕೊಂಡಂತಲ್ಲವೇ;</td></tr>
</table>

| | | |
|---|---|---|
| ಈ) | ನೂರಾರು ವಸತಿ ನಿಲಯಗಳು ಬಾಡಿಗೆ ಮನೆಯಲ್ಲಿ ನಡೆಯುತ್ತಿರುವುದರಿಂದ ಅಲ್ಲಿ ಮೂಲಭೂತ ಸೌಕರ್ಯಗಳಿಲ್ಲದೆ ವಿದ್ಯಾರ್ಥಿಗಳ ಕಷ್ಟ ತಪ್ಪಿಸಲು ಯಾವ ಕ್ರಮ ಕೈಗೊಳ್ಳುವಿರಿ; | ಬೆಳಗಾವಿ ಜಿಲ್ಲೆಯಲ್ಲಿ 116 ವಿದ್ಯಾರ್ಥಿನಿಲಯಗಳು ಸ್ವಂತ ಕಟ್ಟಡಗಳಲ್ಲಿ, 43 ವಿದ್ಯಾರ್ಥಿನಿಲಯಗಳು ಬಾಡಿಗೆ ಕಟ್ಟಡಗಳಲ್ಲಿ ಹಾಗೂ 10 ವಿದ್ಯಾರ್ಥಿನಿಲಯಗಳು ಉಚಿತ ಕಟ್ಟಡಗಳಲ್ಲಿ ಹೀಗೆ ಒಟ್ಟು-169 ವಿದ್ಯಾರ್ಥಿ ನಿಲಯಗಳು ಕಾರ್ಯನಿರ್ವಹಿಸುತ್ತಿರುತ್ತಿವೆ.<br><br>ಇಲಾಖೆಯ 43 ವಿದ್ಯಾರ್ಥಿನಿಲಯಗಳು ಅಗತ್ಯ ಮೂಲಭೂತ ಸೌಕರ್ಯ ಮತ್ತು ಸ್ಥಳಾವಕಾಶ ಲಭ್ಯವಿರುವ ಸೂಕ್ತ ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿವೆ.<br><br>ಮುಂದುವರೆದು, ಆಯಾ ಆರ್ಥಿಕ ವರ್ಷದಲ್ಲಿ ಒದಗಿಸಲಾಗುವ ಅನುದಾನದ ಲಭ್ಯತೆಯನುಸಾರ ಮಂಜೂರಾತಿ ಸಂಖ್ಯೆಗನುಗುಣವಾಗಿ ಬೇಡಿಕೆಯನುಸಾರ ಹೆಚ್ಚಿನ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಕ್ರಮವಹಿಸಲಾಗುತ್ತಿದೆ. |
| ಉ) | ಸರ್ಕಾರ ತಕ್ಷಣವೇ ತಾಲ್ಲೂಕು/ಜಿಲ್ಲಾ ಮಟ್ಟದಲ್ಲಿ ವಸತಿ ನಿಲಯಗಳನ್ನು ಸ್ಥಾಪಿಸಿ ವಿದ್ಯಾರ್ಥಿಗಳಿಗೆ ಶಿಕ್ಷಣ ಮತ್ತು ವಸತಿ ನಿಲಯಗಳ ಗ್ಯಾರಂಟಿ ಕೊಡಲು ಕ್ರಮ ಕೈಗೊಳ್ಳುವುದೇ? | ಪ್ರಸಕ್ತ ಸಾಲಿನಲ್ಲಿ 100 ಸಂಖ್ಯಾಬಲದ 31 ಬಾಲಕರ ಹಾಗೂ 31 ಬಾಲಕಿಯರ ಹೀಗೆ ಒಟ್ಟು 62 ಮೆಟ್ರಿಕ್ ನಂತರದ ಇಂಜಿನಿಯರಿಂಗ್ ಮತ್ತು ಮೆಡಿಕಲ್ ವಿದ್ಯಾರ್ಥಿನಿಲಯಗಳನ್ನು ಮಂಜೂರು ಮಾಡಲಾಗಿದ್ದು, ಈ ಪೈಕಿ ಬೆಳಗಾವಿ ಜಿಲ್ಲೆಗೆ 01 ಬಾಲಕರ ಮತ್ತು 01 ಬಾಲಕಿಯರ ವಿದ್ಯಾರ್ಥಿನಿಲಯಗಳನ್ನು ಮಂಜೂರು ಮಾಡಲಾಗಿದ್ದು, ಸದರಿ ವಿದ್ಯಾರ್ಥಿನಿಲಯಗಳನ್ನು ಪ್ರಾರಂಭಿಸಲು ಕ್ರಮವಹಿಸಲಾಗಿದೆ. |

ಸಂಖ್ಯೆ:ಹಿಂವಕ 1254 ಬಿಎಂಎಸ್ 2025

(ಶಿವರಾಜ ಎಸ್. ತಂಗಡಗಿ)
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು